ಸಿದ್ದೇಶ್ ಸಣ್ಣಗಿರಿ ಕೊಟ್ಟೂರು

# ಜಾಣ ಅಳಿಲು

ವಿಕ್ರಮ ಎಂಬ ವ್ಯಕ್ತಿ ಕಾಡಿನಲ್ಲಿ ಹೋಗುತ್ತಿದ್ದ. ಆಗ ಅವನಿಗೆ ಮರದ ಮೇಲಿಂದ ವಿಚಿತ್ರ ಶಬ್ದವೊಂದು ಕೇಳಿಸಿತು. ಅದೇನೆಂದು ನೋಡಿದಾಗ, ಹಾವೊಂದು ಮರದ ರೆಂಬೆಯಲ್ಲಿ ತನ್ನ ಬಾಲ ಸಿಕ್ಕಿಸಿಕೊಂಡು ಒದ್ದಾಡುತ್ತಿತ್ತು. ಹಾವು ವಿಕ್ರಮನನ್ನು ಕಂಡು ಬೇಡಿಕೊಂಡಿತು: "ಅಯ್ಯಾ ನಿನ್ನ ಕತ್ತಿಯಿಂದ ಈ ರೆಂಬೆಯನ್ನು ಸೀಳು. ನನ್ನ ಬಾಲ ಬಿಡಿಸಿಕೊಳ್ತೀನಿ."

"ಅದು ಸರಿ. ಆದರೆ, ನೀನು ನನ್ನನ್ನು ಕಚ್ಚಿದರೆ?" ಎಂದು ಕೇಳಿದ ವಿಕ್ರಮ.

"ಖಂಡಿತ ಕಚ್ಚೋದಿಲ್ಲ" ಎಂದು ಹಾವು ಮಾತು ಕೊಟ್ಟಿತು. ಅವನು ತನ್ನ ಕತ್ತಿಯಿಂದ ರೆಂಬೆಯ ಸಂದಿಯನ್ನು ಅಗಲಗೊಳಸಿದಾಗ ಹಾವು ತನ್ನ ಬಾಲವನ್ನು ಬಿಡಿಸಿಕೊಂಡಿತು. ಬಳಿಕ ಹಾವು ನುಡಿಯಿತು: "ಅಯ್ಯಾ, ನಿನ್ನ ಕೋಲನ್ನು ಮರದ ರೆಂಬೆಗೆ ಹಿಡಿ. ನಾನು ಕೆಳಗಿಳಿದು

